# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕಿಗುರುತಿನ ಪ್ರಶ್ನೆ ಸಂಖ್ಯೆ: | : | 572 |
| ಸದಸ್ಯರ ಹೆಸರು | : | ಶ್ರೀ ಶರಣಪ್ಪ ಮಟ್ಟೂರು (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2018. |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿಗಳು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯೋಪಾಧ್ಯಾಯರ ಹುದ್ದೆಗೆ ಸುಮಾರು 2 ವರ್ಷಗಳಿಂದ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ; ತೆಗೆದುಕೊಂಡ ಕ್ರಮಗಳೇನು; | ಬಂದಿದೆ.<br><br>2016-17ನೇ ಸಾಲಿನಲ್ಲಿ ಪ್ರೌಢ ಶಾಲಾ ಸಹ ಶಿಕ್ಷಕರಿಂದ ಮುಖ್ಯ ಶಿಕ್ಷಕರ ಹುದ್ದೆಗೆ 247 ಹುದ್ದೆಗಳಿಗೆ ಮುಂಬಡ್ತಿ ನೀಡಲಾಗಿರುತ್ತದೆ.<br><br>ಶ್ರೀ ಬಿ.ಕೆ.ಪವಿತ್ರ ಪ್ರಕರಣದಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ನೀಡಿರುವ ದಿನಾಂಕ: 09.02.2017ರ ತೀರ್ಪಿನನ್ವಯ ರಾಜ್ಯ ಸಿವಿಲ್ ಸೇವೆಗಳಲ್ಲಿನ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಲಾಗಿದೆ. ಈ ಮಧ್ಯೆ ರಾಜ್ಯದ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ಮೀಸಲಾತಿ ಆಧಾರದ ಮೇಲೆ ಬಡ್ತಿ ಹೊಂದಿರುವ ಸರ್ಕಾರಿ ನೌಕರರಿಗೆ ತತ್ಪರಿಣಾಮದ ಜೇಷ್ಠತೆಯನ್ನು ವಿಸ್ತರಿಸುವ ಅಧಿನಿಯಮ 2017, ದಿನಾಂಕ: 23.06.2018ರಿಂದ ಜಾರಿಗೆ ಬಂದಿರುತ್ತದೆ.<br><br>ಮೇಲ್ಕಂಡ ಅಧಿನಿಯಮವನ್ನು ಪ್ರಶ್ನಿಸಿ ಹಲವು ರಿಟ್ ಅರ್ಜಿಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿದ್ದು, ಸದರಿ ಪ್ರಕರಣಗಳನ್ನು ಬಿ.ಕೆ.ಪವಿತ್ರ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಒಟ್ಟುಗೂಡಿ ವಿಚಾರಣೆಗೆ ಬಂದ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ಮುಂದಿನ ನಿರ್ದೇಶನ ನೀಡುವವರೆಗೆ ಯಥಾಸ್ಥಿತಿ ಕಾಪಾಡುವಂತೆ ಆದೇಶಿಸಿರುವುದರಿಂದ ಮಾನ್ಯ ನ್ಯಾಯಾಲಯವು ಮುಂದಿನ ನಿರ್ದೇಶನ ನೀಡುವವರೆಗೆ ಯಾವುದೇ ಮುಂಬಡ್ತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲು ಸುತ್ತೋಲೆ ಸಂಖ್ಯೆ: ಸಿಆಸುಇ 380 ಸೇನೆನಿ 2018, ದಿನಾಂಕ: 03.08.2018ರಲ್ಲಿ ಸೂಚಿಸಲಾಗಿದೆ. |
| ಆ) | ಬಡ್ತಿ ನೀಡಲು ಎಷ್ಟು ಕಾಲಾವಕಾಶ ಬೇಕಾಗಿರುತ್ತದೆ.; | |
| ಇ) | ಇಲ್ಲದಿದ್ದಲ್ಲಿ, ನಿಯಮ 32ರ ಮೇಲೆ ಬಡ್ತಿ ನೀಡಲು ಸರ್ಕಾರದ ನಿಲುವೇನು? | |

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ

ಸಂಖ್ಯೆ: ಇಡಿ 236 ಎಸ್‌ಓಹೆಚ್ 2018)